ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 489 (751)
2. ಸದಸ್ಯರ ಹೆಸರು : ಶ್ರೀ ಎನ್.ಎಸ್. ಭೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು)
3. ಉತ್ತರಿಸುವ ದಿನಾಂಕ : 10.03.2020
4. ಉತ್ತರಿಸುವ ಸಚಿವರು : ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು

ಕ್ರ. ಸಂ.	ಪ್ರಶ್ನೆ	ಉತ್ತರ
ಅ.	ರಾಯಚೂರು ನಗರದಲ್ಲಿ ಬೃಹತ್ ಮತ್ತು ಮಧ್ಯಮ ಕೈಗಾರಿಕೆಗಳ ಸ್ಥಾಪನೆಯ ಅನುಕೂಲಕ್ಕಾಗಿ ಲ್ಯಾಂಡ್ ಬ್ಯಾಂಕ್ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;	ರಾಯಚೂರು ಜಿಲ್ಲೆ ಮತ್ತು ತಾಲ್ಲೂಕು, ಕುರುಬದೊಡ್ಡಿ, ಚಂದ್ರಬಂಡಿ ಮತ್ತು ಸಿಂಗನೊಡಿ ಗ್ರಾಮಗಳ ಒಟ್ಟು 690-13 ಎಕರೆ ಜಮೀನನ್ನು ಕೈಗಾರಿಕಾ ಪ್ರದೇಶ ಸ್ಥಾಪನೆಗಾಗಿ ಗುರುತಿಸಲಾಗಿದೆ
ಆ.	ರಾಯಚೂರು ನಗರದಲ್ಲಿರುವ ಇಂಡಸ್ಟ್ರಿಯಲ್ ಗ್ರೋತ್ ಸೆಂಟರ್‌ನಲ್ಲಿ ಮೂಲ ಸೌಲಭ್ಯಗಳನ್ನು ಹೆಚ್ಚಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು?	ರಾಯಚೂರು ಗ್ರೋಥ್ ಸೆಂಟರ್ ಕೈಗಾರಿಕಾ ಪ್ರದೇಶವನ್ನು 1745-31 ಎಕರೆ ಪ್ರದೇಶದಲ್ಲಿ ಅಭಿವೃದ್ಧಿಪಡಿಸಲಾಗಿದೆ. ಈ ಪ್ರದೇಶಕ್ಕೆ ಮೂಲಸೌಕರ್ಯ ಒದಗಿಸಲು ಸುಮಾರು 15 ಕಿ.ಮೀ ರಸ್ತೆ, ಚರಂಡಿ, ಬೀದಿದೀಪ ಹಾಗೂ ನೀರು ಸರಬರಾಜು, ಪೈಪ್ ಲೈನ್ ಕಾಮಗಾರಿಯನ್ನು ಪೂರ್ಣಗೊಳಸಲಾಗಿದೆ. ಉಳಿದಂತೆ ಮೂಲಭೂತ ಸೌಕರ್ಯಗಳನ್ನು ಹೆಚ್ಚಿಸಲು 4 ಕಿ.ಮೀ ರಸ್ತೆ ಹಾಗೂ ಸೋಲಾರ್ ಬೀದಿದೀಪಗಳನ್ನು ಅಳವಡಿಸುವ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲಾಗುವುದು. ರಸ್ತೆ ಬದಿಯಲ್ಲಿ ನಿಲ್ಲಿಸುವ ವಾಹನಗಳ ತೊಂದರೆಗಳನ್ನು ನಿವಾರಿಸಲು 20-00 ಎಕರೆ ಜಮೀನು ಮೆ: ದೇವರಾಜ್ ಟ್ರಕ್ ಟರ್ಮಿನಲ್‌ಗೆ ಹಂಚಿಕೆಯಾಗಿದ್ದು, ಸದರಿ ಹಂಚಿಕೆದಾರರು ಪ್ರಾರಂಭಿಕ ಠೇವಣಿ ಮೊತ್ತ ಪಾವತಿಸಿದ್ದು, ಬಾಕಿ ಮೊತ್ತವನ್ನು ಪಾವತಿಸಿದ ನಂತರ ಸ್ವಾಧೀನ ಪತ್ರವನ್ನು ನೀಡಲಾಗುವುದು. 5-00 ಎಕರೆ ಪ್ರದೇಶದಲ್ಲಿ ಸಿ.ಇ.ಟಿ.ಪಿ. ಯನ್ನು ನಿರ್ಮಿಸಲು ಕರ್ನಾಟಕ ಪರಿಸರ ಮಾಲಿನ್ಯ ನಿಯಂತ್ರಣ ಮಂಡಳ ಇವರಿಗೆ ಹಸ್ತಾಂತರಿಸಲಾಗಿದ್ದು, ಕರ್ನಾಟಕ ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿಯಿಂದ ಕ್ರಮವಹಿಸಬೇಕಾಗಿದೆ.

ಸಂಖ್ಯೆ: ಸಿಐ 38 ಐಎಪಿ(ಇ) 2020

(ಜಗದೀಶ್ ಶೆಟ್ಟರ್)
ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ
ಸಾರ್ವಜನಿಕ ಉದ್ದಿಮೆಗಳ ಸಚಿವರು